– ಓ.ಎಸ್.ನಂ.16/2008

ಡಿ ಡಬ್ಲ್ಯೂಃ 1

ದಿನಾಂಕ 24-02-2026 ರಂದು ಸಾಕ್ಷಿಯನ್ನು ಕರೆಯಿಸಿ ಸತ್ಯ ಪ್ರತಿಜ್ಞೆ ಬೋಧಿಸಲಾಯಿತು.

**<u>ಮುಂದುವರೆದ ಪಾಟೀ ಸವಾಲುಃ 2 ಮತ್ತು 3 ನೇ ಪ್ರತಿವಾದಿ ಪರ ವಕೀಲರಿಂದಃ</u>**

2 ನೇ ಪ್ರತಿವಾದಿಯು ನನ್ನ ಮತ್ತು ವಾದಿಯ ವಿರುದ್ಧ ಓ ಎಸ್. ನಂ.45/2021 ರಂತೆ ಪಾಲು ವಾಟ್ನಿ ದಾವೆ ಹೂಡಿದ್ದರು ಎಂದರೆ ಸರಿ. ಸದರಿ ದಾವೆಯಲ್ಲಿ ನಾನು ಹಾಜರಾಗಿ ತಕರಾರು ಸಲ್ಲಿಸಿರುತ್ತೇನೆ ಎಂದರೆ ಸರಿ. ಸದರಿ ಪ್ರಕರಣದಲ್ಲಿ ಈ ದಾವಾ ಆಸ್ತಿಯನ್ನು ಸೇರಿಸಿರುವುದಿಲ್ಲ ಎಂದರೆ ಸರಿ. ಸದರಿ ದಾವೆಯಲ್ಲಿ ಈ ದಾವಾ ಆಸ್ತಿಯು 1 ನೇ ಪ್ರತಿವಾದಿಯ ಸ್ವಯಾರ್ಜಿತ ಆಸ್ತಿ ಆಗಿರುವುದಾಗಿ ಸದರಿ ದಾವೆಯಲ್ಲಿ ಅಭಿಪ್ರಾಯ ನೀಡಲಾಗಿದೆ ಎಂದರೆ ಸರಿಯಲ್ಲ. ಸದರಿ ದಾವೆಯ ತೀರ್ಪಿನ ವಿರುದ್ಧ ನಾನು ಮೇಲ್ಮನವಿ ಸಲ್ಲಿಸಿರುವುದಿಲ್ಲ. ಸದರಿ ತೀರ್ಪಿನ ನಂತರ ಎಪ್.ಡಿ.ಪಿ ಪ್ರಕರಣ ದಾಖಲಾಗಿದೆ ಎಂದರೆ ಸರಿ. ನಂತರ ಕಮಿಷನರ್ ಅಳತೆ ಆಗಿರುತ್ತದೆ ಎಂದರೆ ಸರಿಯಲ್ಲ.

**2.** 1 ನೇ ಪ್ರತಿವಾದಿಯ ಸ್ವಯಾರ್ಜಿತ ಆಸ್ತಿಯಾಗಿದ್ದ ಕಾರಣ ಮತ್ತು ಈಗಾಗಲೇ ಮಾರಾಟವಾಗಿರುವ ಕಾರಣ ದಾವಾ ಆಸ್ತಿಯಲ್ಲಿ ನನಗೆ ಯಾವುದೇ ಹಕ್ಕು ಇಲ್ಲ ಎಂದರೆ ಸರಿಯಲ್ಲ. ಆ ಕಾರಣ ಸದರಿ ಖರೀದಿ ಪತ್ರ ಪ್ರಶ್ನೇ ಮಾಡಲು ನನಗೆ ಯಾವುದೇ ಅಧಿಕಾರ ಇಲ್ಲ ಎಂದರೆ ಸರಿಯಲ್ಲ. ದಾವಾ ಆಸ್ತಿಯಲ್ಲಿ ನನಗೆ ಮತ್ತು ವಾದಿಗೆ ಯಾವುದೇ ಹಕ್ಕು ಇಲ್ಲ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲಃ

ತೆ.ನ್ಯಾದಲ್ಲಿ ಬೆ.ಮಾಡಲಾಯಿತು. ನನ್ನ ಸಮಕ್ಷಮ

ಸಹಿ

ಓ ಹೇ ಕೆ ಸರಿ ಇದೆ. ಪ್ರಧಾನ ದಿವಾಣಿ ನ್ಯಾಯಾಧೀಶರು,

ರಾಣೇಬೆನ್ನೂರು.